**National**
**Kannada**
**02.01.2026 19.35 hrs**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನೆಯ ಮೂರನೇ ಕಂತಿನಡಿಯಲ್ಲಿ 22 ನೂತನ ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರ ಅನುಮೋದನೆ
2. 2047ಕ್ಕಿಂತ ಮುಂಚೆಯೇ ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲಿದೆ – ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ವಿಶ್ವಾಸ
3. ರಕ್ಷಣೆ ವಿಷಯದಲ್ಲಿ ಭಾರತಕ್ಕೆ ಯಾವ ದೇಶವು ನಿರ್ದೇಶಿಸಲು ಸಾಧ್ಯವಿಲ್ಲ – ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್
4. ಭಾರತೀಯ ಮಹಿಳಾ ಹಾಕಿ ತಂಡದ ಮುಖ್ಯ ತರಬೇತುದಾರರಾಗಿ ಸ್ಜೋರ್ಡ್ ಮರಿಜ್ನೆ ನೇಮಕ

***************

ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ಯೋಜನೆಯ ಮೂರನೇ ಕಂತಿನಡಿಯಲ್ಲಿ ಕೇಂದ್ರ ಸರ್ಕಾರ 22 ಹೊಸ ಪ್ರಸ್ತಾವನೆಗಳನ್ನು ಅನುಮೋದಿಸಿದೆ. ಇದಕ್ಕೆ 41 ಸಾವಿರದ 863 ಕೋಟಿ ರೂಪಾಯಿಗಳ ಅಂದಾಜು ಹೂಡಿಕೆ ಅಗತ್ಯವಿದೆ. ಮೊಬೈಲ್ ಉತ್ಪಾದನೆ, ದೂರಸಂಪರ್ಕ, ಎಲೆಕ್ಟ್ರಾನಿಕ್ಸ್, ಆಟೊಮೊಟೀವ್ ಮತ್ತು ಐಟಿ ಹಾರ್ಡ್‌ವೇರ್ ಸೇರಿದಂತೆ 11 ಉತ್ಪನ್ನಗಳ ಉತ್ಪಾದನೆಯನ್ನು ಇದು ಒಳಗೊಂಡಿದೆ.

ಈ ಯೋಜನೆಗಳು 2 ಲಕ್ಷ 58 ಸಾವಿರ ಕೋಟಿ ರೂಪಾಯಿ ಮೌಲ್ಯದ ಉತ್ಪಾದನೆಯನ್ನು ಹಾಗೂ ಸುಮಾರು 34 ಸಾವಿರ ನೇರ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆ ಇದೆ.

ಈ ಕುರಿತು ಮಾಹಿತಿ ನೀಡಿದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಈ ವರ್ಷ ನಾಲ್ಕು ಘಟಕಗಳು ಅರೆವಾಹಕಗಳ ವಾಣಿಜ್ಯ ಉತ್ಪಾದನೆಯನ್ನು ಪ್ರಾರಂಭಿಸಲು ಸಿದ್ಧವಾಗಿವೆ. ಎಲೆಕ್ಟ್ರಾನಿಕ್ಸ್ ಪೂರೈಕೆ ಸರಪಳಿಯಲ್ಲಿ ಭಾರತ ಆತ್ಮನಿರ್ಭರತೆ ಸಾಧಿಸಲು ಎಲೆಕ್ಟ್ರಾನಿಕ್ಸ್ ಘಟಕ ಉತ್ಪಾದನಾ ಯೋಜನೆಯನ್ನು ಪ್ರಾರಂಭಿಸಲಾಗಿದೆ ಎಂದು ತಿಳಿಸಿದರು.

ಇಂದು ಅನುಮೋದಿಸಲಾದ ಯೋಜನೆಗಳ ಅಡಿಯಲ್ಲಿ ಕರ್ನಾಟಕ, ಆಂಧ್ರಪ್ರದೇಶ, ಹರಿಯಾಣ, ಮಧ್ಯಪ್ರದೇಶ, ಮಹಾರಾಷ್ಟ್ರ, ತಮಿಳುನಾಡು, ಉತ್ತರ ಪ್ರದೇಶ ಮತ್ತು ರಾಜಸ್ಥಾನ ಸೇರಿ ಒಟ್ಟು 8 ರಾಜ್ಯಗಳಲ್ಲಿ ಘಟಕಗಳ ಸ್ಥಾಪನೆಯಾಗಲಿದೆ ಎಂದು ಅವರು ಮಾಹಿತಿ ನೀಡಿದರು.

***************

2047ಕ್ಕಿಂತ ಮುಂಚೆಯೇ ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ವಿಶ್ವಾಸ ವ್ಯಕ್ತಪಡಿಸಿದರು.

ಚೆನ್ನೈನ ಡಾ.ಎಂ.ಜಿ.ಆರ್ ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆ ವಿಶ್ವವಿದ್ಯಾಲಯದಲ್ಲಿ ಘಟಿಕೋತ್ಸವ ಭಾಷಣ ಮಾಡಿದ ಅವರು, ಭಾರತ ಶೀಘ್ರದಲ್ಲಿಯೇ ವಿಶ್ವದ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗಲಿದೆ ಎಂದು ಹೇಳಿದರು.

ತಂತ್ರಜ್ಞಾನ ಬಹಳಷ್ಟು ಬದಲಾವಣೆಗಳನ್ನು ತಂದಿದೆ. ವಿದ್ಯಾರ್ಥಿಗಳು ಕಾಲಕ್ಕೆ ತಕ್ಕಂತೆ ಬದಲಾಗಬೇಕು. ವಿಶ್ವವಿದ್ಯಾಲಯ ಶಿಕ್ಷಣದ ನಂತರವು ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ವಿಸ್ತರಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಇದೇ ವೇಳೆ, ವಿವಿಧ ವಿಭಾಗಗಳಲ್ಲಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಉಪರಾಷ್ಟ್ರಪತಿ ಅವರು, ಪದವಿ ಪ್ರದಾನ ಮಾಡಿದರು.

***************

ಸೃಜನಶೀಲತೆ, ಸುಸ್ಥಿರತೆ ಮತ್ತು ಸಮುದಾಯದ ಭಾಗವಹಿಸುವಿಕೆಯನ್ನು ಒಟ್ಟುಗೂಡಿಸುವಲ್ಲಿ ಅಹಮದಾಬಾದ್ ಫಲಪುಷ್ಪ ಪ್ರದರ್ಶನ ಗಮನಾರ್ಹ ಪಾತ್ರ ವಹಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

ಈ ಪ್ರದರ್ಶನವು ಪ್ರಕೃತಿಯ ಮೇಲಿನ ಪ್ರೀತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಅವರು ಹೇಳಿದ್ದಾರೆ.

ಇದೇ ವೇಳೆ, ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಮಾತನಾಡಿ, ಅಹಮಾದಾಬಾದ್ ಮಹಾನಗರ ಪಾಲಿಕೆ ಆಯೋಜಿಸಿದ್ದ 14ನೇ ಫಲಪುಷ್ಪ ಪ್ರದರ್ಶನದಲ್ಲಿ ಎರಡು ಗಿನ್ನಿಸ್ ವಿಶ್ವ ದಾಖಲೆಗಳು ಸ್ಥಾಪನೆಯಾಗಿರುವುದು ದೇಶಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

***************

ನವದೆಹಲಿಯ ರಾಯ್ ಪಿಥೋರಾ ಸಾಂಸ್ಕೃತಿಕ ಸಂಕೀರ್ಣದಲ್ಲಿ ನಾಳೆ ನಡೆಯಲಿರುವ ಭಗವಾನ್ ಬುದ್ಧರ ಪವಿತ್ರ ಪಿಪ್ರಹ್ವಾ ಅವಶೇಷಗಳ ಅಂತಾರಾಷ್ಟ್ರೀಯ ಪ್ರದರ್ಶನವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ.

ಈ ಪ್ರದರ್ಶನವು ನವದೆಹಲಿಯ ರಾಷ್ಟ್ರೀಯ ವಸ್ತುಸಂಗ್ರಹಾಲಯ ಮತ್ತು ಕೋಲ್ಕತ್ತಾದ ಭಾರತೀಯ ವಸ್ತುಸಂಗ್ರಹಾಲಯದ ಸಂಗ್ರಹಗಳಲ್ಲಿ ಸಂರಕ್ಷಿಸಲಾಗಿರುವ ಪಿಪ್ರಹ್ವಾ ಅಧಿಕೃತ ಅವಶೇಷಗಳು ಮತ್ತು ಪುರಾತತ್ತ್ವ ವಸ್ತುಗಳನ್ನು ಒಂದು ಶತಮಾನಕ್ಕೂ ಹೆಚ್ಚು ಕಾಲದ ನಂತರ ಮೊದಲ ಬಾರಿಗೆ, ಒಂದೆಡೆ ಒಟ್ಟುಗೂಡಿಸುತ್ತದೆ.

1898 ರಲ್ಲಿ ಪತ್ತೆಯಾದ ಪಿಪ್ರಹ್ವಾ ಅವಶೇಷಗಳು ಆರಂಭಿಕ ಬೌದ್ಧಧರ್ಮದ ಪುರಾತತ್ತ್ವ ಅಧ್ಯಯನದಲ್ಲಿ ಕೇಂದ್ರ ಸ್ಥಾನವನ್ನು ಹೊಂದಿವೆ. ಇವು ಭಗವಾನ್ ಬುದ್ಧನಿಗೆ ನೇರವಾಗಿ ಸಂಬಂಧಿಸಿದ ಐತಿಹಾಸಿಕವಾಗಿ ಮಹತ್ವದ ಅವಶೇಷಗಳಲ್ಲಿ ಸೇರಿವೆ. ಪುರಾತತ್ತ್ವ ಶಾಸ್ತ್ರದ ಪುರಾವೆಗಳು ಪಿಪ್ರಹ್ವಾ ಸ್ಥಳವನ್ನು ಪ್ರಾಚೀನ ಕಪಿಲವಸ್ತುವಿನೊಂದಿಗೆ ಸಂಯೋಜಿಸುತ್ತವೆ. ಇದನ್ನು ಭಗವಾನ್ ಬುದ್ಧನು ವೈರಾಗ್ಯ ತಾಳುವ ಮೊದಲು ತನ್ನ ಆರಂಭಿಕ ಜೀವನವನ್ನು ಕಳೆದ ಸ್ಥಳವೆಂದು ಗುರುತಿಸಲಾಗಿದೆ ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ.

ಬೌದ್ಧ ಬೋಧನೆಗಳೊಂದಿಗೆ ಭಾರತೀಯ ನಾಗರಿಕತೆಯ ಸಂಪರ್ಕಗಳನ್ನು ಮತ್ತು ಆಧ್ಯಾತ್ಮಿಕ, ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಲು ಸರ್ಕಾರದ ಪ್ರಯತ್ನಗಳನ್ನು ಈ ಪ್ರದರ್ಶನ ಒತ್ತಿಹೇಳುತ್ತದೆ.

***************

ಭಾರತ ತನ್ನ ರಕ್ಷಣೆಯನ್ನು ಹೇಗೆ ಮಾಡಿಕೊಳ್ಳಬೇಕು ಎಂಬುದನ್ನು ಯಾವ ದೇಶವು ನಿರ್ದೇಶಿಸಲು ಸಾಧ್ಯವಿಲ್ಲ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ಚೆನ್ನೈನಲ್ಲಿಂದು ನಡೆದ 'ಶಾಸ್ತ್ರ 2026 ಐಐಟಿ ಮದ್ರಾಸ್ ಟೆಕ್ನೋ ಎಂಟರ್‌ಟೇನ್‌ಮೆಂಟ್ ಉತ್ಸವದ ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಭಾರತ ತನ್ನನ್ನು ತಾನು ರಕ್ಷಿಸಿಕೊಳ್ಳಲು ಅಗತ್ಯವಿರುವ ಎಲ್ಲವನ್ನು ಮಾಡುತ್ತದೆ ಎಂದರು.

ನೆರೆಯ ದೇಶಗಳಿಂದ ಉತ್ತೇಜಿತ ಭಯೋತ್ಪಾದನೆಯಿಂದ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ಭಾರತ ಹೊಂದಿದೆ. ನಿರಂತರ ಗಡಿಯಾಚೆಗಿನ ಭಯೋತ್ಪಾದನೆ, ಸದ್ಭಾವನೆಯನ್ನು ಹಾಳು ಮಾಡುತ್ತದೆ ಮತ್ತು ನೀರು ಹಂಚಿಕೆ ವ್ಯವಸ್ಥೆಗಳಂತಹ ಪ್ರಯೋಜನಗಳನ್ನು ರದ್ದುಗೊಳಿಸುತ್ತದೆ ಎಂದು ಹೇಳಿದರು.

ಭಾರತೀಯ ವಿದೇಶಾಂಗ ನೀತಿಯು ಜಗತ್ತನ್ನು ಒಂದು ಕುಟುಂಬವಾಗಿ ನೋಡುತ್ತದೆ. ರಾಷ್ಟ್ರೀಯ ಸಾಮರ್ಥ್ಯ ಮತ್ತು ಪಾಲುದಾರಿಕೆಗಳ ಮೂಲಕ ಸಮಸ್ಯೆ ಪರಿಹಾರದ ಮೇಲೆ ಕೇಂದ್ರೀಕರಿಸುತ್ತದೆ ಎಂದು ಸಚಿವ ಡಾ.ಎಸ್.ಜೈಶಂಕರ್ ಅಭಿಪ್ರಾಯಪಟ್ಟರು.

***************

ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ 'ಪ್ರಗತಿ' ವೇದಿಕೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ರೂಪಿಸಿದ್ದಾರೆ ಎಂದು ಕೇಂದ್ರ ಸಂಪುಟ ಕಾರ್ಯದರ್ಶಿ ಟಿ.ವಿ.ಸೋಮನಾಥನ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಪ್ರಗತಿ 50ನೇ ಸಭೆಯಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಸ್ಯೆಗಳು ಮತ್ತು ಅಡಚಣೆಗಳನ್ನು ಎದುರಿಸುತ್ತಿರುವ ನಿರ್ಣಾಯಕ ಮೂಲಸೌಕರ್ಯ ಯೋಜನೆಗಳನ್ನು ತ್ವರಿತಗೊಳಿಸಲು ಕೇಂದ್ರ ಮತ್ತು ರಾಜ್ಯಗಳ ನಡುವೆ ಸಮನ್ವಯವನ್ನು ಸುಧಾರಿಸುವುದು ಪ್ರಗತಿಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಪ್ರಗತಿ ಕಾರ್ಯವಿಧಾನವು ಕೇಂದ್ರ ಸಚಿವಾಲಯಗಳು ಮತ್ತು ರಾಜ್ಯ ಸರ್ಕಾರಗಳ ಸಕ್ರಿಯ ಸಹಯೋಗದ ಮೂಲಕ ಯೋಜನೆಯ ಮೇಲ್ವಿಚಾರಣೆ, ನಾಗರಿಕರ ಕುಂದು-ಕೊರತೆ ಪರಿಹಾರ ಮತ್ತು ಯೋಜನೆಯ ಅನುಷ್ಠಾನವನ್ನು ಪರಿಶೀಲಿಸಲು ತಂತ್ರಜ್ಞಾನ ಆಧಾರಿತ ವೇದಿಕೆಯನ್ನು ಕಲ್ಪಿಸುತ್ತದೆ ಎಂದು ಟಿ.ವಿ.ಸೋಮನಾಥನ್ ಹೇಳಿದರು.

***************

ಕೇರಳದ ಶಬರಿಮಲೆ ಚಿನ್ನದ ಲೇಪನ ವಂಚನೆ ಪ್ರಕರಣದಲ್ಲಿ ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿ ಅವರನ್ನು ವಿಶೇಷ ತನಿಖೆ ತಂಡ-ಎಸ್ಐಟಿ ಇಂದು ಮತ್ತೊಮ್ಮೆ ವಿಚಾರಣೆಗೆ ಒಳಪಡಿಸಿತು.

ಉನ್ನಿಕೃಷ್ಣನ್ ಪೊಟ್ಟಿ ಈ ಹಿಂದೆ ಶಬರಿಮಲೆ ದೇವಸ್ಥಾನದಲ್ಲಿ ಮಾಜಿ ಸಹಾಯಕ ಅರ್ಚಕರಿಗೆ ಸಹಾಯಕರಿಗೆ ಕರ್ತವ್ಯ ನಿರ್ವಹಿಸಿದ್ದರು.

ಏತನ್ಮಧ್ಯೆ, ಕೇರಳ ಹೈಕೋರ್ಟ್ ನೇಮಿಸಿರುವ ಎಸ್ಐಟಿ, ಶಬರಿಮಲೆ ದೇವಸ್ಥಾನದಿಂದ ಚಿನ್ನವನ್ನು ಕಳ್ಳತನ ಮಾಡಲಾಗಿದೆ ಎನ್ನಲಾದ ಚಿನ್ನದ ಬಗ್ಗೆ, ಚಿನ್ನದ ಹೊದಿಕೆಯ ಫಲಕಗಳು ಸೇರಿದಂತೆ ಇತರೆ ವಿವರಗಳನ್ನು ಸಂಗ್ರಹಿಸುತ್ತಿದೆ.

***************

ರೈತರ ಆದಾಯವನ್ನು ಹೆಚ್ಚಿಸುವುದು ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ಮಹಾರಾಷ್ಟ್ರದ ನಾಸಿಕ್‌ನಲ್ಲಿಂದು ನಡೆದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಚಿವರು, ರೈತರ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗಿದೆ. ಕೃಷಿ ವಲಯವನ್ನು ಬಲಪಡಿಸಲು ಅಗತ್ಯವಿರುವ ಎಲ್ಲ ಪ್ರಯತ್ನಗಳನ್ನು ಮುಂದುವರೆಸಲಾಗುವುದು ಎಂದು ಭರವಸೆ ನೀಡಿದರು.

***************

ಈ ವರ್ಷದ ಮಾರ್ಚ್ ವೇಳೆಗೆ 500 ರೂಪಾಯಿ ಮುಖಬೆಲೆಯ ನೋಟುಗಳ ಚಲಾವಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಗಿತಗೊಳಿಸಲಿದೆ ಎಂದು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ಮಾಹಿತಿಯನ್ನು ಕೇಂದ್ರ ಸರ್ಕಾರ ಅಲ್ಲಗೆಳೆದಿದೆ.

ಇದು ಸಂಪೂರ್ಣವಾಗಿ ಸತ್ಯಕ್ಕೆ ದೂರವಾದುದು. 500 ರೂಪಾಯಿ ಮುಖಬೆಲೆಯ ನೋಟುಗಳ ಚಲಾವಣೆ ಕಾನೂನುಬದ್ಧವಾಗಿ ಮುಂದುವರೆಯಲಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

***************

ಭಾರತೀಯ ಮಹಿಳಾ ಹಾಕಿ ತಂಡದ ಮುಖ್ಯ ಕೋಚ್ ಆಗಿ ಸ್ಜೋರ್ಡ್ ಮರಿಜ್ನೆ ಅವರನ್ನು ಹಾಕಿ ಇಂಡಿಯಾ ನೇಮಕ ಮಾಡಿದೆ.

ನೆದರ್‌ಲ್ಯಾಂಡ್ ಆಟಗಾರರಾಗಿರುವ ಮರಿಜ್ನೆ ಅವರು, 2020ರ ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಭಾರತೀಯ ಮಹಿಳಾ ತಂಡವನ್ನು ಐತಿಹಾಸಿಕ 4ನೇ ಸ್ಥಾನಕ್ಕೆ ಕೊಂಡೊಯ್ಯದಿದ್ದರು.

ತೆಲಂಗಾಣದ ಹೈದರಾಬಾದ್‌ನಲ್ಲಿ ಮಾರ್ಚ್ 8 ರಿಂದ 14 ರವರೆಗೆ ನಡೆಯಲಿರುವ ಐಎಚ್‌ಎಫ್ ಹಾಕಿ ಮಹಿಳಾ ವಿಶ್ವಕಪ್ ಅರ್ಹತಾ ಪಂದ್ಯಗಳು, ಮುಖ್ಯ ಕೋಚ್ ಆಗಿ ಮರಿಜ್ನೆ ಅವರಿಗೆ ಮೊದಲ ದೊಡ್ಡ ಸವಾಲಾಗಿದೆ.

ಬೆಂಗಳೂರಿನ ಭಾರತೀಯ ಕ್ರೀಡಾ ಪ್ರಾಧಿಕಾರದಲ್ಲಿ ಇದೇ 19 ರಿಂದ ರಾಷ್ಟ್ರೀಯ ಹಾಕಿ ತರಬೇತಿ ಶಿಬಿರ ಆರಂಭವಾಗಲಿದೆ.

***************

ಏಳು ಬಾರಿಯ ಗ್ರ್ಯಾಂಡ್ ಸ್ಲಾಮ್ ಚಾಂಪಿಯನ್ ವೀನಸ್ ವಿಲಿಯಮ್ಸ್ ಇದೇ 18 ರಂದು ಪ್ರಾರಂಭವಾಗಲಿರುವ ಆಸ್ಟ್ರೇಲಿಯನ್ ಓಪನ್ ಟೆನಿಸ್ ಪಂದ್ಯಾವಳಿಯಲ್ಲಿ ಮಹಿಳಾ ವೈಲ್ಡ್‌ಕಾರ್ಡ್ ಪ್ರವೇಶ ಪಡೆದಿದ್ದಾರೆ.

45 ವರ್ಷದ ವೀನಸ್ ವಿಲಿಯಮ್ಸ್ ಆಸ್ಟ್ರೇಲಿಯನ್ ಓಪನ್‌ನಲ್ಲಿ ಸ್ಪರ್ಧಿಸುತ್ತಿರುವ ಅತ್ಯಂತ ಹಿರಿಯ ಮಹಿಳಾ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

******* ಮುಕ್ತಾಯ *******